**All India Radio: Bangalore**
**National Bulletin In Kannada**
**08.11.2025  1.10 p.m.**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**08.11.2025  1.10 p.m.**

**<><><><>**

ಮುಖ್ಯಾಂಶಗಳು

1. ವಿಶ್ವಸಂಸ್ಥೆಯ ಕೋಪ್-೩೦ ಸಮ್ಮೇಳನದಲ್ಲಿ ದೇಶದ ಹವಾಮಾನ ಬದ್ಧತೆಯನ್ನು ಪುನರುಚ್ಚರಿಸಿದ ಭಾರತ
2. ಭಾರತೀಯ ರೈಲ್ವೆಯ ಮುಂದಿನ ಪೀಳಿಗೆಗೆ ಅಡಿಪಾಯ ಹಾಕಲಿರುವ ವಂದೇ ಭಾರತ್ ರೈಲುಗಳು - ಪ್ರಧಾನಿ ನರೇಂದ್ರ ಮೋದಿ
3. ಜಮ್ಮು ಕಾಶ್ಮೀರದಲ್ಲಿ ಇಬ್ಬರು ಒಳನುಸುಳುಕಾರರನ್ನು ಸದೆಬಡೆದ ಭದ್ರತಾ ಪಡೆಗಳು
4. ಚೆಸ್ ೯೧ನೇ ಭಾರತದ ಗ್ರ್ಯಾಂಡ್‌ಮಾಸ್ಟರ್ ಆಗಿ ಹೊರಹೊಮ್ಮಿದ ರಾಹುಲ್ ವಿ.ಎಸ್.

**<><><><>**

ಬ್ರೆಜಿಲ್‌ನಲ್ಲಿನ ಭಾರತದ ರಾಯಭಾರಿ ದಿನೇಶ್ ಭಾಟಿಯಾ, ಭಾರತದ ಹವಾಮಾನ ಬದ್ಧತೆಯನ್ನು ಪುನರುಚ್ಚರಿಸಿದ್ದಾರೆ. ಸುಸ್ಥಿರತೆಗೆ ಮಹತ್ವಾಕಾಂಕ್ಷೆಯ, ಎಲ್ಲರನ್ನೂ ಒಳಗೊಂಡ, ನ್ಯಾಯಯುತ ಮತ್ತು ಸಮಾನ ಪರಿವರ್ತನೆಯನ್ನು ಸಾಧಿಸಲು ದೇಶವು ಎಲ್ಲಾ ರಾಷ್ಟ್ರಗಳೊಂದಿಗೆ ಕೆಲಸ ಮಾಡಲು ಸಿದ್ಧವಾಗಿದೆ ಎಂದು ಅವರು ಹೇಳಿದ್ದಾರೆ. ಬ್ರೆಜಿಲ್‌ನ ಬೆಲೆಮ್‌ನಲ್ಲಿ ನಡೆದ ವಿಶ್ವಸಂಸ್ಥೆಯ ಹವಾಮಾನ ಸಮ್ಮೇಳನ-ಕೋಪ್ ೩೦ರಲ್ಲಿ ಮಾತನಾಡಿದ ಅವರು, ಕಳೆದ ದಶಕದಲ್ಲಿ ಭಾರತವು ಕಡಿಮೆ ಇಂಗಾಲದ ಮಾರ್ಗದಲ್ಲಿ ತನ್ನ ಅಭಿವೃದ್ಧಿಯನ್ನು ಮುನ್ನಡೆಸಲು ನಿರಂತರವಾಗಿ ಶ್ರಮಿಸುತ್ತಿದೆ ಎಂದರು. ಪ್ರಧಾನ ಮಂತ್ರಿ ನರೇಂದ್ರ ಮೋದಿಯವರ ನೇತೃತ್ವದಲ್ಲಿ ಭಾರತವು ನಿಗದಿತ ಸಮಯಕ್ಕಿಂತ ಮುಂಚಿತವಾಗಿ ತನ್ನ ಹವಾಮಾನ ಗುರಿಗಳನ್ನು ಸ್ಥಿರವಾಗಿ ತಲುಪಿದೆ ಎಂದು ಅವರು ಹೇಳಿದರು. ೨೦೦೫ರಿಂದ ೨೦೨೦ರ ನಡುವೆ, ದೇಶವು ಜಿ.ಡಿ.ಪಿಯ ಹೊರಸೂಸುವಿಕೆಯ ತೀವ್ರತೆಯನ್ನು ಶೇಕಡಾ ೩೬ರಷ್ಟು ಕಡಿಮೆ ಮಾಡಿದ್ದು, ಪಳೆಯುಳಿಕೆಯೇತರ ವಿದ್ಯುತ್ ಸ್ಥಾಪಿತ ಸಾಮರ್ಥ್ಯವು ಈಗ ದೇಶದ ಒಟ್ಟು ಸ್ಥಾಪಿತ ಸಾಮರ್ಥ್ಯದ ಶೇಕಡಾ ೫೦ ಕ್ಕಿಂತ ಹೆಚ್ಚಾಗಿದೆ. ಇದು ನಿಗದಿತ ಸಮಯಕ್ಕಿಂತ ಐದು ವರ್ಷಗಳ ಮುಂಚಿತವಾಗಿ ನಮ್ಮ ಪರಿಷ್ಕೃತ ಉತ್ಪಾದನಾ ಗುರಿಯನ್ನು ತಲುಪಲು ನಮಗೆ ಅನುವು ಮಾಡಿಕೊಡುತ್ತದೆ ಎಂದು ಅವರು ಹೇಳಿದರು. ಭಾರತವು ತನ್ನ ಅರಣ್ಯ ಮತ್ತು ಮರಗಳ ವ್ಯಾಪ್ತಿಯನ್ನು ಸಂರಕ್ಷಿಸಿರುವುದು ಮಾತ್ರವಲ್ಲದೆ ವಿಸ್ತರಣೆಯಲ್ಲೂ

ಪ್ರಗತಿ ಸಾಧಿಸಿದೆ. ಪ್ರಸ್ತುತ ಅರಣ್ಯವು ದೇಶದ ಒಟ್ಟು ಭೌಗೋಳಿಕ ಪ್ರದೇಶದ ಶೇಕಡಾ ೨೫ ಪಾಯಿಂಟ್ ಒಂದು-ಏಳರಷ್ಟಿದೆ ಎಂದು ಅವರು ಹೇಳಿದರು. ಸುಮಾರು ೨೦೦ ಗಿಗಾವ್ಯಾಟ್‌ಗಳ ನವೀಕರಿಸಬಹುದಾದ ಇಂಧನದೊಂದಿಗೆ, ಭಾರತವು ಈಗ ವಿಶ್ವದ ಮೂರನೇ ಅತಿದೊಡ್ಡ ನವೀಕರಿಸಬಹುದಾದ ಇಂಧನ ಉತ್ಪಾದಕ ರಾಷ್ಟ್ರವಾಗಿದೆ ಎಂದು ಅವರು ಮಾಹಿತಿ ನೀಡಿದರು.

<><><>

ವಂದೇ ಭಾರತ್, ನಮೋ ಭಾರತ್ ಮತ್ತು ಅಮೃತ್ ಭಾರತ್ ನಂತಹ ರೈಲುಗಳು ಭಾರತೀಯ ರೈಲ್ವೆಯ ಮುಂದಿನ ಪೀಳಿಗೆಗೆ ಅಡಿಪಾಯ ಹಾಕುತ್ತಿವೆ ಎಂದು ಪ್ರಧಾನಿ ನರೇಂದ್ರ ಮೋದಿ ಇಂದು ಪ್ರತಿಪಾದಿಸಿದ್ದಾರೆ. ಉತ್ತರ ಪ್ರದೇಶದ ವಾರಣಾಸಿಯಿಂದ ನಾಲ್ಕು ಹೊಸ ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳಿಗೆ ಹಸಿರು ನಿಶಾನೆ ತೋರಿಸಿದ ನಂತರ ಪ್ರಧಾನಿ ಸಭೆಯನ್ನುದ್ದೇಶಿಸಿ ಮಾತನಾಡಿದರು. ದೇಶದ ಪ್ರಮುಖ ಪ್ರದೇಶಗಳಲ್ಲಿ ಸಂಪರ್ಕವನ್ನು ಹೆಚ್ಚಿಸಲು ವಾರಣಾಸಿ ರೈಲು ನಿಲ್ದಾಣದಿಂದ ಬನಾರಸ್-ಖಜುರಾಹೊ ವಂದೇ ಭಾರತ್ ರೈಲು ಮತ್ತು ಲಕ್ನೋ-ಸಹಾರನ್‌ಪುರ, ಫಿರೋಜ್‌ಪುರ-ದೆಹಲಿ ಮತ್ತು ಎರ್ನಾಕುಲಂ-ಬೆಂಗಳೂರು ಮಾರ್ಗಗಳ ಮೂರು ವಂದೇ ಭಾರತ್ ರೈಲುಗಳಿಗೆ ಮೋದಿ ಹಸಿರು ನಿಶಾನೆ ತೋರಿದರು. ದೇಶದಲ್ಲಿ ೧೬೦ಕ್ಕೂ ಹೆಚ್ಚು ವಂದೇ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಈಗ ಕಾರ್ಯನಿರ್ವಹಿಸುತ್ತಿವೆ, ಈ ಸಾಧನೆಗಾಗಿ ದೇಶದ ನಾಗರಿಕರನ್ನು ಅವರು ಅಭಿನಂದಿಸಿದರು. ಅಭಿವೃದ್ಧಿ ಹೊಂದಿದ ದೇಶಗಳ ಆರ್ಥಿಕ ಬೆಳವಣಿಗೆಯಲ್ಲಿ ಮೂಲಸೌಕರ್ಯವು ಪ್ರಮುಖ ಅಂಶವಾಗಿದೆ ಮತ್ತು ಭಾರತವು ಅಭಿವೃದ್ಧಿಯ ಹಾದಿಯಲ್ಲಿ ವೇಗವಾಗಿ ಸಾಗುತ್ತಿದೆ ಎಂದು ಅವರು ಒತ್ತಿ ಹೇಳಿದರು.

ಧ್ವನಿ : ಪ್ರಧಾನಿ ನರೇಂದ್ರ ಮೋದಿ (೩೩ ಸೆಕೆಂಡ್‌ಗಳು)

ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ಮತ್ತು ಉತ್ತರ ಪ್ರದೇಶದ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ್ ಕೂಡ ಈ ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ದಕ್ಷಿಣ ಭಾರತದಲ್ಲಿ, ಎರ್ನಾಕುಲಂ-ಬೆಂಗಳೂರು ನಡುವೆ ವಂದೇ ಭಾರತ್ ಪ್ರಯಾಣದ ಸಮಯವನ್ನು ಸುಮಾರು ೨ ಗಂಟೆಗಳ ಕಾಲ ಕಡಿಮೆ ಮಾಡುತ್ತದೆ ಮತ್ತು ಪ್ರಯಾಣವನ್ನು ೮ ಗಂಟೆ ೪೦ ನಿಮಿಷಗಳಲ್ಲಿ ಪೂರ್ಣಗೊಳಿಸುತ್ತದೆ. ಇದು ಪ್ರಮುಖ ಐಟಿ ಮತ್ತು ವಾಣಿಜ್ಯ ಕೇಂದ್ರಗಳನ್ನು ಸಂಪರ್ಕಿಸುತ್ತದೆ, ವೃತ್ತಿಪರರು, ವಿದ್ಯಾರ್ಥಿಗಳು ಮತ್ತು ಪ್ರವಾಸಿಗರಿಗೆ ವೇಗವಾದ ಮತ್ತು ಹೆಚ್ಚು ಆರಾಮದಾಯಕ ಪ್ರಯಾಣದ ಆಯ್ಕೆಯನ್ನು ಒದಗಿಸುತ್ತದೆ.

<><><>

ಪ್ರಧಾನಿ ನರೇಂದ್ರ ಮೋದಿ ಇಂದು ಬಿಜೆಪಿಯ ಹಿರಿಯ ನಾಯಕ ಎಲ್.ಕೆ. ಅಡ್ವಾಣಿ ಅವರಿಗೆ ಹುಟ್ಟುಹಬ್ಬದ ಶುಭಾಶಯಗಳನ್ನು ಕೋರಿದ್ದಾರೆ. ಅವರು ಅಡ್ವಾಣಿ ಅವರ ಉತ್ತಮ ಆರೋಗ್ಯ ಮತ್ತು ದೀರ್ಘಾಯುಷ್ಯಕ್ಕಾಗಿ ಪ್ರಾರ್ಥಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅಡ್ವಾಣಿ ಅವರನ್ನು ಅತ್ಯುನ್ನತ ದೃಷ್ಟಿ ಮತ್ತು ಬುದ್ಧಿಶಕ್ತಿಯಿಂದ ಆಶೀರ್ವದಿಸಲ್ಪಟ್ಟ ರಾಜಕಾರಣಿ ಎಂದು ಬಣ್ಣಿಸಿರುವ ಪ್ರಧಾನಿ ನರೇಂದ್ರ ಮೋದಿ, ಅವರ ಜೀವನವನ್ನು ಭಾರತದ ಪ್ರಗತಿಯನ್ನು ಬಲಪಡಿಸುವಲ್ಲಿ ಮೀಸಲಿಟ್ಟಿದ್ದರು ಎಂದು ಹೊಗಳಿದರು. ಅಡ್ವಾಣಿ ಯಾವಾಗಲೂ ನಿಸ್ವಾರ್ಥ ಕರ್ತವ್ಯ ಮತ್ತು ದೃಢ ತತ್ವಗಳ ಮನೋಭಾವವನ್ನು ಸಾಕಾರಗೊಳಿಸಿದ್ದಾರೆ. ಅವರ ಕೊಡುಗೆಗಳು ಭಾರತದ ಪ್ರಜಾಪ್ರಭುತ್ವ ಮತ್ತು ಸಾಂಸ್ಕೃತಿಕ ಭೂದೃಶ್ಯದ ಮೇಲೆ ಅಳಿಸಲಾಗದ ಛಾಪು ಮೂಡಿಸಿವೆ ಎಂದು ಅವರು ಹೇಳಿದರು.

<><><>

ಜಮ್ಮು ಮತ್ತು ಕಾಶ್ಮೀರದ, ಕುಪ್ವಾರಾ ಜಿಲ್ಲೆಯ ಕೇರನ್ ಸೆಕ್ಟರ್‌ನಲ್ಲಿ ನಿನ್ನೆ ರಾತ್ರಿ ಭದ್ರತಾ ಪಡೆಗಳೊಂದಿಗೆ ನಡೆದ ಗುಂಡಿನ ಚಕಮಕಿಯಲ್ಲಿ ಇಬ್ಬರು ಒಳನುಸುಳುಕಾರರು ಸಾವನ್ನಪ್ಪಿದ್ದಾರೆ. ಎಲ್‌ಒಸಿಯ ಈ ಭಾಗಕ್ಕೆ ನುಸುಳಲು ಪ್ರಯತ್ನಿಸುತ್ತಿದ್ದ ಭಯೋತ್ಪಾದಕರ ಗುಂಪನ್ನು ಜಾಗೃತ ಪಡೆಗಳು ತಡೆದವು ಎಂದು ಸೇನಾ ವಕ್ತಾರರು ತಿಳಿಸಿದ್ದಾರೆ. ಒಳನುಸುಳುಕಾರ ಪ್ರಯತ್ನದ ವಿರುದ್ಧ ಸೈನಿಕರು ಗುಂಡಿನ ದಾಳಿ ನಡೆಸಿದ ಪೊಕೀಸರ ನಡುವೆ, ಭೀಕರ ಗುಂಡಿನ ಚಕಮಕಿ ನಡೆದು ಇಬ್ಬರು ಒಳನುಸುಳುಕಾರರು ಸಾವನ್ನಪ್ಪಿದ್ದಾರೆ. ಈ ಪ್ರದೇಶದಲ್ಲಿ ಕಾರ್ಯಾಚರಣೆ ಮುಂದುವರೆದಿದೆ ಎಂದು ವಕ್ತಾರರು ತಿಳಿಸಿದ್ದಾರೆ.

<><><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ರಾಷ್ಟ್ರಪತಿ ಭವನದಲ್ಲಿರುವ ಮಿಟ್ಟಿ ಕೆಫೆಯನ್ನು ಸೇರ್ಪಡೆ, ಸಮಾನತೆ ಮತ್ತು ಅಪರಿಮಿತ ಸಾಧ್ಯತೆಗಳ ಸಂಕೇತವೆಂದು ಶ್ಲಾಘಿಸಿದ್ದಾರೆ. ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ರಾಷ್ಟ್ರಪತಿಗಳು ಮಿಟ್ಟಿ ಕೆಫೆಯನ್ನು ಆಸ್ವಾದಿಸಲು ಸಂದರ್ಶಕರನ್ನು ಪ್ರೋತ್ಸಾಹಿಸಿದ್ದಾರೆ. ದಿವ್ಯಾಂಗರು ಮತ್ತು ಅವರ ಕುಟುಂಬಗಳನ್ನು ಸಬಲೀಕರಣಗೊಳಿಸುವಲ್ಲಿ ಅದರ ಪಾತ್ರವನ್ನು ಎತ್ತಿ ತೋರಿಸಿದರು.

<><><>

ದಕ್ಷಿಣ ಆಫ್ರಿಕಾದಲ್ಲಿ ಈ ವರ್ಷ ಆಯೋಜನೆಗೊಳ್ಳಲಿರುವ ಜಿ-೨೦ ಶೃಂಗಸಭೆಯಲ್ಲಿ ಅಮೆರಿಕದ ಯಾವುದೇ ಅಧಿಕಾರಿಗಳು ಭಾಗವಹಿಸುವುದಿಲ್ಲ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್

ಘೋಷಿಸಿದ್ದಾರೆ. ಈ ನಿರ್ಧಾರಕ್ಕೆ ದೇಶದ ಅಲ್ಪಸಂಖ್ಯಾತ ಬಿಳಿ ರೈತರೊಂದಿಗೆ ದೌರ್ಜನ್ಯ ದಕ್ಷಿಣ ಆಫ್ರಿಕಾ ಸರ್ಕಾರವು ಎಸಗಿದೆ ಎಂಬ ಆರೋಪವನ್ನು ಅವರು ಮುಂದಿಟ್ಟಿದ್ದಾರೆ. ಸರ್ಕಾರವು ಆಫ್ರಿಕನ್ನರ ವಿರುದ್ಧ ಹಿಂಸಾಚಾರ, ಹತ್ಯೆಗಳು ಮತ್ತು ಅಕ್ರಮ ಭೂ ಕಬಳಿಕೆಗೆ ಅವಕಾಶ ನೀಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ. ಬದಲಿಗೆ ೨೦೨೬ರ ಜಿ-೨೦ ಶೃಂಗಸಭೆಯನ್ನು ಮಿಯಾಮಿಯಲ್ಲಿ ಆಯೋಜಿಸುವಂತೆ ಅವರು ಕೇಳಿಕೊಂಡಿದ್ದಾರೆ.

<><><><>

ರಾಜ್ಯ ಮತ್ತು ಸ್ಥಳೀಯ ನಾಯಕರ ಇಚ್ಛೆಗೆ ವಿರುದ್ಧವಾಗಿ ಅಮೇರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪೋರ್ಟ್‌ಲ್ಯಾಂಡ್‌ಗೆ ರಾಷ್ಟ್ರೀಯ ಗಾರ್ಡ್ ಪಡೆಗಳನ್ನು ನಿಯೋಜಿಸುವುದನ್ನು ಶಾಶ್ವತವಾಗಿ ತಡೆಯುವ ಆದೇಶವನ್ನು ಫೆಡರಲ್ ನ್ಯಾಯಾಧೀಶರು ನಿನ್ನೆ ಹೊರಡಿಸಿದ್ದಾರೆ. ಅಮೆರಿಕದ ಜಿಲ್ಲಾ ನ್ಯಾಯಾಧೀಶ ಕರಿನ್ ಇಮ್ಮರ್‌ಗುಟ್ ಅವರ ಈ ತೀರ್ಪು, ವಲಸೆ ಅಧಿಕಾರಿಗಳ ವಿರುದ್ಧದ ಪ್ರತಿಭಟನೆಗಳನ್ನು ಹತ್ತಿಕ್ಕಲು, ಟ್ರಂಪ್ ಮಿಲಿಟರಿ ಬಲವನ್ನು ಬಳಸುವುದನ್ನು ಶಾಶ್ವತವಾಗಿ ನಿರ್ಬಂಧಿಸಿದ ಮೊದಲ ತೀರ್ಪಾಗಿದೆ.

<><><><>

೬ನೇ ಆಸಿಯಾನ್ ವೈಯಕ್ತಿಕ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಒಂದು ಸುತ್ತು ಬಾಕಿ ಇರುವಾಗಲೇ ಜಯ ಗಳಿಸುವ ಮೂಲಕ ಭಾರತದ ರಾಹುಲ್ ವಿ. ಎಸ್, ೯೧ ನೇ ಗ್ರ್ಯಾಂಡ್‌ಮಾಸ್ಟರ್ ಆಗಿ ಹೊರಹೊಮ್ಮಿದ್ದಾರೆ. ಒಂದು ವಾರದ ಹಿಂದೆ, ಚೆನ್ನೈನ ಇಲ್ಲಂಪಾರ್ಥಿ ಎ.ಆರ್ ಭಾರತದ ೯೦ನೇ ಗ್ರ್ಯಾಂಡ್‌ಮಾಸ್ಟರ್ ಆಗಿದ್ದರು. ಗ್ರ್ಯಾಂಡ್‌ಮಾಸ್ಟರ್ ಪ್ರಶಸ್ತಿಯು, ಫಿಡೇ ನೀಡುವ ಅತ್ಯುನ್ನತ ಚೆಸ್ ಶ್ರೇಯಾಂಕವಾಗಿದೆ, ಇದು ಫಿಡೇ ಮಾಸ್ಟರ್ ಮತ್ತು ಕ್ಯಾಂಡಿಡೇಟ್ ಮಾಸ್ಟರ್‌ಗಿಂತ ಮೇಲಿನ ಶ್ರೇಯಾಂಕವಾಗಿದೆ.

<><><><>

ಭಾರತ-ಆಸ್ಟ್ರೇಲಿಯಾ ನಡುವಿನ ೫ನೇ ಟಿ-೨೦ ಪುರುಷರ ಕ್ರಿಕೆಟ್ ಪಂದ್ಯ ಇಂದು ಬ್ರಿಸ್‌ಬೆನ್‌ನಲ್ಲಿ ನಡೆಯಲಿದೆ. ಭಾರತೀಯ ಕಾಲಮಾನ ಮಧ್ಯಾಹ್ನ ೧.೪೫ಕ್ಕೆ ಪಂದ್ಯ ಆರಂಭವಾಗಲಿದೆ. ಕರಾರ ಓವನ್‌ನಲ್ಲಿ ನಡೆದ ೪ನೇ ಪಂದ್ಯದಲ್ಲಿ ಆಸ್ಟ್ರೇಲಿಯಾ ವಿರುದ್ಧ ೪೮ ರನ್‌ಗಳ ಜಯ ಗಳಿಸಿರುವ ಭಾರತ ಈ ಸರಣಿಯಲ್ಲಿ ೨-೧ರ ಮುನ್ನಡೆ ಪಡೆದಿದೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>